10

ಇಲಾಖೆ / ವಿಷಯ : DEPARTMENT / SUBJECT: ಸಂತಾಪ

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE : 9/10/20

# ಕೇಂದ್ರ ಸಚಿವ ಪಾಸ್ವಾನ್ ನಿಧನ



ನವದೆಹಲಿ: ಇತ್ತೀಚೆಗಷ್ಟೆ ಹೃದಯ ಸರ್ಜರಿಗೆ ಒಳಗಾಗಿ ಕೇಂದ್ರ ಗ್ರಾಹಕ ವ್ಯವಹಾರ, ಆಹಾರ ಮತ್ತು ಸಾರ್ವಜನಿಕ ವಿತರಣೆ ಸಚಿವ ರಾಮ್ ವಿಲಾಸ್ ಪಾಸ್ವಾನ್ ನಿಧನರಾಗಿದ್ದಾರೆ. ಅವರಿಗೆ 74 ವರ್ಷ ವಯಸ್ಸಾಗಿತ್ತು. ಹಲವು ದಶಕಗಳಿಂದ ರಾಜಕೀಯದಲ್ಲಿ ಸಕ್ರಿಯರಾಗಿದ್ದ ಅವರು ದಲಿತ ಮುಖಂಡರಾಗಿ ಹೊರಹೊಮ್ಮಿದ್ದರು. ಲೋಕಜನಶಕ್ತಿ ಎನ್ನುವ ಪಕ್ಷವನ್ನು ಕಟ್ಟಿದ್ದು, ಪ್ರಸ್ತುತ ಅವರ ಪುತ್ರ ಚಿರಾಗ್ ಪಕ್ಷದ ಅಧ್ಯಕ್ಷರಾಗಿದ್ದಾರೆ.

ಕಳೆದ ವಾರ ರಾಂವಿಲಾಸ್ ಅವರನ್ನು ಆಸ್ಪತ್ರೆಗೆ ದಾಖಲಿಸಿದಾಗ ಅವರು ಯಾವ ಕಾಯಿಲೆಯಿಂದ ಬಳಲುತ್ತಿದ್ದಾರೆ ಎನ್ನುವುದನ್ನು ಬಹಿರಂಗಪಡಿಸಿರಲಿಲ್ಲ. ವಯೋಸಹಜ ಹಲವು ಕಾಯಿಲೆಗಳಿಗೆ ಅವರು ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ವರದಿಯಾಗಿತ್ತು.

ಟ್ವೀಟ್ ಮೂಲಕ ತಮ್ಮ ತಂದೆಯ ನಿಧನದ ಸುದ್ದಿಯನ್ನು ಬಹಿರಂಗಪಡಿಸಿರುವ ಚಿರಾಗ್, ನೀವು ಈ ಲೋಕದಲ್ಲಿ ಇಲ್ಲ. ಆದರೆ ಎಲ್ಲಿದ್ದರೂ, ನನ್ನೊಂದಿಗೆ ಇರುತ್ತೀರಿ ಎನ್ನುವ ಭರವಸೆ ಇದೆ ಎನ್ನುವ ದುಃಖಪೂರಿತ ಶ್ರದ್ಧಾಂಜಲಿ ಅರ್ಪಿಸಿದ್ದಾರೆ. ಮಾಜಿ ಪ್ರಧಾನಿ ವಿ.ಪಿ ಸಿಂಗ್ ಅವರ ಸಂಪುಟದಲ್ಲಿ ಕಾರ್ಮಿಕರ ಕಲ್ಯಾಣ ಸಚಿವರಾಗಿದ್ದ ಅವರು, ಎಚ್.ಡಿ.ದೇವೇಗೌಡ ಅವರ ಸಂಪುಟದಲ್ಲಿ ರೈಲ್ವೆ ಸಚಿವರಾಗಿ, ಅಟಲ್ ಬಿಹಾರಿ ವಾಜಪೇಯಿ ಅವರ ಸರ್ಕಾರದಲ್ಲಿ ಸಂವಹನ ಮತ್ತು ಮಾಹಿತಿ ತಂತ್ರಜ್ಞಾನ ಮತ್ತು ಗಣಿ ಸಚಿವರಾಗಿ, ಮನಮೋಹನ್ ಸಿಂಗ್ ಅವರ ಸರ್ಕಾರದಲ್ಲಿ ರಾಸಾಯನಿಕ ಮತ್ತು ರಸಗೊಬ್ಬರ ಸಚಿವರಾಗಿ ಸೇವೆ ಸಲ್ಲಿಸಿದ್ದರು.

ರಾಷ್ಟ್ರಪತಿ ರಾಮನಾಥ ಕೋವಿಂದ್, ಪ್ರಧಾನಿ ನರೇಂದ್ರ ಮೋದಿ, ಕಾಂಗ್ರೆಸ್ ಮುಖಂಡ ರಾಹುಲ್ ಗಾಂಧಿ ಸೇರಿದಂತೆ ಹಲವರು ಕಂಬನಿ ಮಿಡಿದಿದ್ದಾರೆ.